# ಕರ್ನಾಟಕ ವಿಧಾನ ಪರಿಷತ್ತು

2

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 17 (179) |
| ಸದಸ್ಯರ ಹೆಸರು | : | ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 14-12-2021 |
| ಉತ್ತರಿಸುವ ಸಚಿವರು | : | ನಗರಾಭಿವೃದ್ಧಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಾದ "ಸ್ಮಾರ್ಟ್ ಸಿಟಿ" ಯೋಜನೆ ಅಡಿ ಆಯ್ಕೆಯಾಗಿರುವ ನಗರಗಳಾವುವು; (ಸಂಪೂರ್ಣ ಮಾಹಿತಿ ನೀಡುವುದು) | ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಪ್ರಾಯೋಜಿತವಾದ ಸ್ಮಾರ್ಟ್ ಸಿಟಿ ಯೋಜನೆಯು 2015-16ರ ಸಾಲಿನಲ್ಲಿ ಪ್ರಾರಂಭವಾಗಿದ್ದು, ಸದರಿ ಯೋಜನೆಯಡಿ ರಾಜ್ಯದ 7 ನಗರಗಳಾದ, ಬೆಳಗಾವಿ, ದಾವಣಗೆರೆ, ಹುಬ್ಬಳ್ಳಿ-ಧಾರವಾಡ, ಮಂಗಳೂರು, ಶಿವಮೊಗ್ಗ, ತುಮಕೂರು ಮತ್ತು ಬೆಂಗಳೂರು ನಗರಗಳು ಆಯ್ಕೆಯಾಗಿರುತ್ತವೆ. |
| ಆ) | ಈ ಯೋಜನೆ ಅಡಿ ಬೆಳಗಾವಿ ನಗರ ಆಯ್ಕೆಯಾಗಿದ್ದು, ಈ ನಗರವನ್ನು ಸ್ಮಾರ್ಟ್ ಸಿಟಿಯಾಗಿ ಪರಿವರ್ತಿಸಲು ರೂಪಿಸಿರುವ ಯೋಜನೆಗಳಾವುವು; ಈ ಯೋಜನೆಗಳ ರೂಪುರೇಷೆಗಳೇನು;<br><br>(ವಲಯವಾರು ಭೌತಿಕ-ಆರ್ಥಿಕ ಗುರಿ ಮತ್ತು ಪ್ರಗತಿಯನ್ನೊಳಗೊಂಡಂತೆ ತಹಲ್ ವರೆಗಿನ ವಿವರ ನೀಡುವುದು) | ಬೆಳಗಾವಿ ನಗರವು ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಮೊದಲನೇ ಸುತ್ತಿನಲ್ಲಿ ದಿನಾಂಕ:28.01.2016 ಆಯ್ಕೆಯಾಗಿರುತ್ತದೆ. ಮಾರ್ಗಸೂಚಿಯಂತೆ ಸ್ಮಾರ್ಟ್ ಸಿಟಿ ಯೋಜನೆಯ ಪ್ರಸ್ತಾವನೆಯನ್ನು ನಗರದ ಚುನಾಯಿತ ಪ್ರತಿನಿಧಿಗಳೊಂದಿಗೆ, ಸಾರ್ವಜನಿಕರೊಂದಿಗೆ, ಕ್ಷೇತ್ರ ಪರಿಣಿತರೊಂದಿಗೆ ಚರ್ಚಿಸಿ ತಯಾರಿಸಲಾಗಿದ್ದು, ಈ ಪ್ರಸ್ತಾವನೆಗಳನ್ನು ನಗರ ಸ್ಥಳೀಯ ಸಂಸ್ಥೆಯ ಕೌನ್ಸಿಲ್ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆಯಲಾಗಿರುತ್ತದೆ. ಅಲ್ಲದೇ ಬೆಳಗಾವಿ ನಗರದ ಪ್ರಸ್ತಾವನೆಗಳಿಗೆ ಕೇಂದ್ರ ಸರ್ಕಾರವು ಅನುಮೋದನೆ ನೀಡಿದ್ದು, ಆದ್ಯತೆ ಮೇರೆಗೆ ಅನುಷ್ಠಾನಗೊಳಿಸಲು ಕ್ರಮವಹಿಸಲಾಗಿರುತ್ತದೆ.<br><br>ಸ್ಮಾರ್ಟ್ ಸಿಟಿ ಯೋಜನೆಯು ಈ ಕೆಳಗಿನ 2 ಮುಖ್ಯ ಅಂಶಗಳನ್ನು ಒಳಗೊಂಡಿರುತ್ತದೆ.<br>• ಪ್ರದೇಶಾಭಿವೃದ್ಧಿ ಕಾಮಗಾರಿಗಳು: ನಗರದ ಯಾವುದೇ ಒಂದು ಪ್ರದೇಶವನ್ನು ಗುರುತಿಸಿ ಮರುಸುಧಾರಣೆ (Retrofitting), ಪುನರ್ ಅಭಿವೃದ್ಧಿ (Re-Development), ಗ್ರೀನ್ ಫೀಲ್ಡ್ ಮಾದರಿಯಲ್ಲಿ ಅಭಿವೃದ್ಧಿಗೊಳಿಸುವುದು<br>• ಪ್ಯಾನ್ ಸಿಟಿ ಕಾಮಗಾರಿಗಳು: ಮಾಹಿತಿ ತಂತ್ರಜ್ಞಾನ ಬಳಸಿ ನಗರ ವ್ಯಾಪ್ತಿಯಲ್ಲಿ ಸೇವೆಗಳನ್ನು ಒದಗಿಸುವುದು.<br><br>ಮಾರ್ಗಸೂಚಿಯನುಸಾರ ಬೆಳಗಾವಿ ನಗರವು ಸ್ಮಾರ್ಟ್ ಸಿಟಿ ಯೋಜನೆಯಡಿ ರಸ್ತೆಗಳ ಅಭಿವೃದ್ಧಿ, ಉದ್ಯಾನವನಗಳ ಅಭಿವೃದ್ಧಿ, ಮಾರುಕಟ್ಟೆಗಳು, ಪಬ್ಲಿಕ್ ಬೈಕ್ ಸೈಕಲ್ ಶೇರಿಂಗ್, ಸ್ಮಾರ್ಟ್ ಸ್ಕೂಲ್, ಕಮ್ಯಾಂಡ್ & ಕಂಟ್ರೋಲ್ ಸೆಂಟರ್, ಕೆರೆ ಪ್ರದೇಶಗಳ ಅಭಿವೃದ್ಧಿ ಹೀಗೆ ಹಲವಾರು ವಲಯಗಳಲ್ಲಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸುತ್ತಿದೆ.<br><br>ಬೆಳಗಾವಿ ನಗರದಲ್ಲಿ ಸ್ಮಾರ್ಟ್ ಸಿಟಿ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳ ವಿವರ, ಅವುಗಳ ಪ್ರಸ್ತುತ ಭೌತಿಕ ಹಾಗೂ ಆರ್ಥಿಕ ಪ್ರಗತಿ ವಿವರಗಳನ್ನು **ಅನುಬಂಧ**ದಲ್ಲಿ ನೀಡಿದೆ. |